**1 ನೇ ಹೆಚ್ಚುವರಿ ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಚಿತ್ರದುರ್ಗ**

**ಸಿ.ಸಿ.94/2022**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ವಿಶ್ವ | PW:1 |
| ತಂದೆಯ ಹೆಸರು | - | ರಂಗೇಶಪ್ಪ | CW:2 |
| ವಯಸ್ಸು | - | 35 ವರ್ಷ | ಪ್ರಮಾಣ ವಚನ ಬೋದಿಸಿದ |
| ಉದ್ಯೋಗ | - | ಕೂಲಿಕೆಲಸ | ದಿ: 07/08/2025 |
| ವಾಸ | - | ಭೀಮಸಮುದ್ರ, ಚಿತ್ರದುರ್ಗ | |

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದಃ**

ಚಾಸಾ.1 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸದರಿ ದಾಖಲೆಗೆ ಸ್ಥಳ ಅಮಾನತ್ ಪಂಚನಾಮೆಯಲ್ಲಿ ತನ್ನ ಸಹಿಯನ್ನು ಗುರುತಿಸಿದ್ದರಿಂದ ಸದರಿ ದಾಖಲೆಯನ್ನು ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಲಸಾಯಿತು. ಸದರಿ ದಾಖಲೆಗೆ ಸಹಿಯನ್ನು 2020 ನೇ ಇಸವಿಯಲ್ಲಿ ಬೀಮಸಮುದ್ರ ಗ್ರಾಮದ ಬಸ್ ಸ್ಟಾಂಡ್ ಹತ್ತಿರ ಸಹಿ ಮಾಡಿರುತ್ತೇನೆ ಅದರಲ್ಲಿ ಬರೆದಿರುವ ವಿಚಾರಗಳು ಗೊತ್ತಿರುವುದಿಲ್ಲ. ನಮ್ಮ ಸಮಕ್ಷಮದಲ್ಲಿ ಸ್ಥಳ ಪಂಚನಾಮೆ ಮಾಡಿ ಯಾವುದೇ ವಸ್ತುಗಳನ್ನು ಅಮಾನತ್ ಪಡಿಸಿಕೊಂಡಿರುವುದಿಲ್ಲ . ನನಗೆ ಯಾವುದೇ ನೋಟೀಸು ನೀಡಿರುವುದಿಲ್ಲ. ನೋಟೀಸಿ ನಲ್ಲಿ ತನ್ನ ಸಹಿಯನ್ನು ಗುರುತಿಸಿದ್ದರಿಂದ ಸದರಿ ದಾಖಲೆಯನ್ನು ನಿಪಿ.2 ಎಂದು ಸಾಕ್ಷಿಯ ಸಹಿಯನ್ನು ನಿಪಿ.2(ಎ) ಎಂದು ಗುರುತಿಸಲಾಯಿತು. ಕಚ್ಚಾನಕಾಶೆಯಲ್ಲಿ ಸಾಕ್ಷಿಯು ತನ್ನ ಸಹಿಯನ್ನು ಗುರುತಿಸಿದ್ದರಿಂದ ಕಚ್ಚಾ ನಕಾಶೆಯನ್ನು ನಿಪಿ.3 ಎಂದು ಸಾಕ್ಷಿಯ ಸಹಿಯನ್ನು ನಿಪಿ.3(ಎ) ಎಂದು ಗುರುತಿಸಲಾಯಿತು. ನಿಪಿ.1 ರ ಕಾಲಕ್ಕೆ ಬಾವಚಿತ್ರವನ್ನು ತೆಗೆಯಲಾಗಿ ಅದರಲ್ಲಿ ತನ್ನ ತಾನು ಇರುವುಕೆಯನ್ನು ಗುರುತಿಸಿದ್ದರಿಂದ

ಸದರಿ ಬಾವಚಿತ್ರವನ್ನು ನಿಪಿ.4 ಎಂದು ಗುರುತಿಸಲಾಯಿತು. ನನ್ನ ಜೊತೆ ಬೇರೆ ಯಾರು ಇರುತ್ತಾರೆ ನನಗೆ ಗೊತ್ತಿರುವುದಿಲ್ಲ.

**( ಈ ಹಂತದಲ್ಲಿ ಸ.ಸ. ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀ ಸವಾಲು : ಸ.ಸ. ಅಭಿಯೋಜಕರಿಂದ**

2. ದಿಃ30.01.2020 ರಂದು ಬೀಮಸಮುದ್ರ ಮತ್ತು ಬೀ ದುರ್ಗಕ್ಕೆ ಹೋಗುವ ರಸ್ತೆಯಲ್ಲಿರುವ ಮಲ್ಲಮ್ಮನ ಮನೆಯಲ್ಲಿ ಚಾಸಾ.1 ರವರು ತೋರಿಸಿದ್ದ ಸ್ಥಳದಲ್ಲಿ ನನ್ನ ಹಾಗೂ ಚಾಸಾ.3 ರವರ ಸಮಕ್ಷಮದಲ್ಲಿ ಸ್ಥಳ ಪಂಚನಾಮೆ ಮಾಡಿ ಮದುವೆ ಕಾಲದಲ್ಲಿ ತೆಗೆಸಿದ ಪೊಟೊಗಳು ಒಂದು ಖಾಲಿ ಬಾಟಲಿಯನ್ನು ನಿಪಿ.1 ರಂತೆ ಪಂಚನಾಮೆ ಮಾಡಿ ಅಮಾನತ್ ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಮಹಜರ ಕಾಲದಲ್ಲಿ ನಿಪಿ.2 ರಂತೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿಯಲ್ಲ. ಕಚ್ಛಾ ನಕಾಶೆಗೆ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ನಿಪಿ.1 ರ ಕಾಲಕ್ಕೆ ಹಾಜರಿದ್ದು ನಿಪಿ.2 ಮತ್ತು 3 ಕ್ಕೆ ಸಹಿ ಮಾಡಿ ನಿಪಿ.4 ರಂತೆ ಬಾವಚಿತ್ರದಲ್ಲಿ ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿಯ ಪರ ವಕೀಲರಿಂದಃ**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚುಮಾಡಲಾಯಿತು)**

**ಓ ಹೇ ಕೇ ಸರಿ ಇದೆ**

**1 ನೇ ಹೆಚ್ಚುವರಿ ಹಿರಿಯ ಸಿವಿಲ್ ಮತ್ತು**
**ಜೆ ಎಂ ಎಫ್ ಸಿ ನ್ಯಾಯಾಧೀಶರು, ಚಿತ್ರದುರ್ಗ**